ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–328

**30 ಆಗಸ್ಟ್ 2025 * ಶನಿವಾರ * ಸಂಜೆ 6.00**

ಜೆಎಸ್‌ಎಸ್ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜು
ನಾಚನಹಳ್ಳಿ ಪಾಳ್ಯ, ಜೆ.ಪಿ. ನಗರ, ಮೈಸೂರು

---

ದಿವ್ಯಾಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

ಅಧ್ಯಕ್ಷತೆ

**ಪ್ರೊ. ಕೆ.ಆರ್. ಮಲ್ಲಿಕಾರ್ಜುನಪ್ಪ**

ಮಾಜಿ ವಿಧಾನಪರಿಷತ್ ಸದಸ್ಯರು

ಉಪನ್ಯಾಸ

**ಪ್ರೊ. ಚಂದ್ರಶೇಖರಯ್ಯ**

ವಿಶ್ರಾಂತ ಪ್ರಾಂಶುಪಾಲರು

ವಿಷಯ : ಕಾಯಕಯೋಗಿ ಪರಮಪೂಜ್ಯ ರಾಜೇಂದ್ರ ಶ್ರೀಗಳು

ಭಜನೆ

**ಜಗದ್ಗುರು ಶ್ರೀ ಶಿವರಾತ್ರೀಶ್ವರ ಹವ್ಯಾಸಿ ಭಜನಾ ಸಂಘ**

ಜೆಎಸ್‌ಎಸ್ 2ನೇ ಹಂತ, ಕುಪ್ಪಲೂರು, ಜೆ.ಪಿ. ನಗರ, ಮೈಸೂರು

---

ಪ್ರಾಯೋಜಕರು

**ಶ್ರೀಮತಿ ಕೆಂಪಮ್ಮಣಿ ಮತ್ತು ಶ್ರೀ ಗೌಡಿಕೆ ಮಾದಪ್ಪ (ಆಯರಹಳ್ಳಿ)**

# 809, 17ನೇ ಮುಖ್ಯ ರಸ್ತೆ, 'ಡಿ' ಬ್ಲಾಕ್
ಮೊದಲನೆ ಹಂತ, ಜೆ.ಪಿ. ನಗರ, ಮೈಸೂರು

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಈ ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಪ್ರೊ. ಕೆ.ಆರ್. ಮಲ್ಲಿಕಾರ್ಜುನಪ್ಪನವರು** ಚಾಮರಾಜನಗರ ಜಿಲ್ಲೆಯ ಕೊತ್ತಲವಾಡಿ ಗ್ರಾಮದವರು. ಅರ್ಥಶಾಸ್ತ್ರ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದು ಜೆಎಸ್‌ಎಸ್ ಕಾಲೇಜುಗಳಲ್ಲಿ ಅರ್ಥಶಾಸ್ತ್ರ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿರುತ್ತಾರೆ. ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾಗಿದ್ದರು. ಸ್ವಯಂ ನಿವೃತ್ತಿ ಹೊಂದಿ ರಾಜಕೀಯ ಪ್ರವೇಶಿಸಿದರು. ವಿಧಾನಪರಿಷತ್ ಸದಸ್ಯರಾಗಿದ್ದರು. ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ಸಂಸ್ಥೆ (ನಿ.)ಯ ಅಧ್ಯಕ್ಷರಾಗಿದ್ದರು. ಪ್ರಸ್ತುತ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುತ್ತಾರೆ.

**ಪ್ರೊ. ಚಂದ್ರಶೇಖರಯ್ಯನವರು** ಜೆಎಸ್‌ಎಸ್ ಕಾಲೇಜುಗಳಲ್ಲಿ ಇಂಗ್ಲಿಷ್ ಪ್ರಾಧ್ಯಾಪಕರಾಗಿ, ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸಿ ನಿವೃತ್ತರಾಗಿರುತ್ತಾರೆ. ಮೈಸೂರು ವಿಶ್ವವಿದ್ಯಾನಿಲಯದ ಶ್ರೀ ಬಸವೇಶ್ವರ ಸಾಮಾಜಿಕ ಪರಿಷ್ಕರಣೆ, ಸಂಶೋಧನೆ, ಅಧ್ಯಯನ ಹಾಗೂ ವಿಸ್ತರಣಾ ಕೇಂದ್ರದ ಸಂದರ್ಶಕ ಪ್ರಾಧ್ಯಾಪಕರಾಗಿಯೂ ಕಾರ್ಯ ನಿರ್ವಹಿಸಿರುತ್ತಾರೆ. ಜೆಎಸ್‌ಎಸ್ ಮಹಾವಿದ್ಯಾಪೀಠದ ಶರಣಪಥ ತ್ರೈಮಾಸಿಕ ಆಂಗ್ಲ ಪತ್ರಿಕೆಯ ಸಂಪಾದಕರಾಗಿರುತ್ತಾರೆ. ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಹಲವಾರು ಕೃತಿಗಳನ್ನು ರಚಿಸಿದ್ದಾರೆ. ಇವರ ಸಾಧನೆಗಾಗಿ ಹಲವಾರು ಪ್ರಶಸ್ತಿ, ಪುರಸ್ಕಾರಗಳು ಸಂದಿವೆ. ಇವರು ರಚಿಸಿರುವ ಎ ಸರ್ವೆ ಆಫ್ ವೀರಶೈವ ರಿಲಿಜನ್ ಅಂಡ್ ಲಿಟರೇಚರ್ ಗ್ರಂಥಕ್ಕೆ ಶ್ರೀ ಶಿವರಾತ್ರೀಶ್ವರ ಪ್ರಶಸ್ತಿ ಲಭಿಸಿದೆ.

**ಶ್ರೀಮತಿ ಕೆಂಪಮ್ಮಣಿ ಮತ್ತು ಶ್ರೀ ಗೌಡಿಕೆ ಮಾದಪ್ಪನವರು** ಮೈಸೂರು ತಾಲ್ಲೂಕಿನ ಆಯರಹಳ್ಳಿ ಗ್ರಾಮದವರು. ಇವರಿಗೆ ಇಬ್ಬರು ಪುತ್ರರು ಮತ್ತು ಇಬ್ಬರು ಪುತ್ರಿಯರು ಶ್ರೀ ಎ.ಎಂ. ಶಿವಕುಮಾರಸ್ವಾಮಿರವರು ಹುಲ್ಲಹಳ್ಳಿಯ ಜೆಎಸ್‌ಎಸ್ ಪದವಿಪೂರ್ವ ಕಾಲೇಜಿನಲ್ಲಿ ಭೂಗೋಳಶಾಸ್ತ್ರ ಉಪನ್ಯಾಸಕರಾಗಿ ಕೆಲಸ ನಿರ್ವಹಿಸುತ್ತಿದ್ದಾರೆ. ದ್ವಿತೀಯ ಪುತ್ರ ಶ್ರೀ ಎ.ಎಂ. ಶಿವಪ್ರಕಾಶ್‌ರವರು ಜೆಎಸ್‌ಎಸ್ ಮಹಾವಿದ್ಯಾಪೀಠದಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಶ್ರೀಮತಿ ಎ.ಎಂ. ಕಾಂತಾಮಣಿ ಮತ್ತು ಶ್ರೀಮತಿ ಎ.ಎಂ. ಜಗದಾಂಬರವರು ಗೃಹಿಣಿಯರಾಗಿದ್ದಾರೆ.